ಪದವಿ ಪೂರ್ವ ಶಿಕ್ಷಣ ಮಂಡಳಿ ಮತ್ತು ಅನುದಾನ ಪಡೆದ ಶಿಕ್ಷಣ ಸಂಸ್ಥೆಗಳಲ್ಲಿ ಮೀಸಲಾತಿ ಬಗ್ಗೆ

302 - ಶ್ರೀ ಜಿ. ರಾಜುಗೌಡ (ಹನೂರು) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಪದವಿ ಪೂರ್ವ ಶಿಕ್ಷಣ ಮಂಡಳಿ ಮತ್ತು ಅನುದಾನ ಪಡೆದ ಶಿಕ್ಷಣ ಸಂಸ್ಥೆಗಳು ಮೀಸಲಾತಿ ನೀತಿಗೆ ಗೌರವ ನೀಡುತ್ತಿಲ್ಲವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಪದವಿ ಪೂರ್ವ ಕಾಲೇಜುಗಳಲ್ಲಿ ತೆರವಾಗುವ ಮುಖ್ಯೋಪಾಧ್ಯಾಯರು ಪ್ರಿನ್ಸಿಪಾಲರು, ಗ್ರಂಥಪಾಲಕರು, ವ್ಯಾಯಾಮ ಶಿಕ್ಷಕರು, ಕಛೇರಿ ಅಧೀಕ್ಷಕರು ಅಧ್ಯಕ್ಷರು ಹುದ್ದೆಗಳನ್ನು ತುಂಬುವಾಗ ಮೀಸಲು ನೀತಿಯನ್ನು ಅನುಸರಿಸುವುದಿಲ್ಲವೇ?*

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಸಚಿವರು) :

ಅ) ಅನುದಾನ ಸಂಹಿತೆ ಹಾಗೂ ನೇಮಕಾತಿ ನಿಯಮಗಳನ್ವಯ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿಗಳು ಬೋಧಕ ಬೋಧಕೇತರ ಹುದ್ದೆಗಳಿಗೆ ನೇಮಕ ಮಾಡಿಕೊಂಡಿದ್ದವುಗಳನ್ನು ಇಲಾಖೆಯಿಂದ ಪರಿಶೀಲಿಸಿದೆ. ನೇಮಕಾತಿ ಹಾಗೂ ಮೀಸಲಾತಿ ನಿಯಮಪಾಲಿಸಿಲ್ಲದವುಗಳನ್ನು ತಿರಸ್ಕರಿಸಲಾಗುತ್ತದೆ. ಅನುದಾನ ನೀಡುತ್ತಿರುವ ಶಿಕ್ಷಣ ಸಂಸ್ಥೆಗಳಿಗೆ ಕಡ್ಡಾಯವಾಗಿ ಮೀಸಲಾತಿ ನಿಯಮ ಪಾಲಿಸುವಂತೆ ಸೂಚಿಸಿದೆ.

ಆ) ಸ್ವತಂತ್ರ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಾಂಶುಪಾಲರು, ಗ್ರಂಥಪಾಲಕರು, ದೈಹಿಕ ಶಿಕ್ಷಕರು, ಒಂದೊಂದೇ ಹುದ್ದೆಗಳಾಗಿದ್ದು ಇವುಗಳನ್ನು ತುಂಬುವಲ್ಲಿ ಸಹ ಮೀಸಲಾತಿ ನಿಯಮ ಪಾಲಿಸಲಾಗುತ್ತಿದೆ. ಪ್ರಾಂಶುಪಾಲರ ಹುದ್ದೆಗಳನ್ನು ಬೋಧಕ ಅನುಭವ ಸೇವಾ ಜೇಷ್ಠತೆಯ ಆಧಾರದ ಮೇಲೆ 5 ವರ್ಷ ಬೋಧಕನಾಭವ ಇರುವ ಪರಿಶಿಷ್ಟ ಜಾತಿ ಪಂಗಡ ಉಪನ್ಯಾಸಕರ ಆಯಾ ಸಂಸ್ಥೆಗಳಲ್ಲಿ ಲಭ್ಯವಿರುದಿರುವಾಗ ಸೇವಾ ಜೇಷ್ಠತೆಯನ್ನು ಅನುಸರಿಸಿ ಬಡ್ತಿಯನ್ನು ನೀಡಲಾಗುವುದು. ಮಿಕ್ಕ ಸಂದರ್ಭಗಳಲ್ಲಿ ಕಡ್ಡಾಯವಾಗಿ ಮೀಸಲಾತಿ ನಿಯಮ ಅನುಸರಿಸಲಾಗುವುದು.

ಬೆಂಗಳೂರಿನಲ್ಲಿರುವ ಮಹಾರಾಣಿ ವಿಜ್ಞಾನ ಕಾಲೇಜಿನ ಪ್ರಿನ್ಸಿಪಾಲರ ಬಗ್ಗೆ

1179 - ಶ್ರೀ ಎಂ. ನಾರಾಯಣಸ್ವಾಮಿ (ಬೇತಮಂಗಲ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಂಗಳೂರಿನಲ್ಲಿರುವ ಮಹಾರಾಣಿ ವಿಜ್ಞಾನ ಕಾಲೇಜಿನ ಈಗಿನ ಪ್ರಿನ್ಸಿಪಾಲರು ಎಷ್ಟು ವರ್ಷಗಳಿಂದ ಈ ಕಾಲೇಜಿನಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ?*

ಆ) *ಇವರು ಬೆಂಗಳೂರಿನಲ್ಲಿ ವಾಸ ಮಾಡುತ್ತಿದ್ದು ಇದೇ ಕಾಲೇಜಿನಲ್ಲಿ ಸುಮಾರು 10 ವರ್ಷಗಳ ಸೇವೆ ಸಲ್ಲಿಸುತ್ತಿದ್ದು, ಇದುವರೆವಿಗೂ ಇವರನ್ನು ವರ್ಗಾವಣೆ ಮಾಡದಿರಲು ಕಾರಣಗಳೇನು?*

ಇ) *ಹರಿಜನ ಗಿರಿಜನ, ಹಿಂದುಳಿದವರು ಹಾಗೂ ಅಲ್ಪಸಂಖ್ಯಾತ ವಿದ್ಯಾರ್ಥಿನಿಯರಿಗೆ ಪ್ರವೇಶಾವಕಾಶ ನೀಡುವುದರಲ್ಲಿ ತಾರತಮ್ಯ ತೋರಿಸಿ ವಂಚಿಸುತ್ತಿರುವ ಈ ಪ್ರಿನ್ಸಿಪಾಲರನ್ನು ಬೇರೆಡೆಗೆ ವರ್ಗಾಯಿಸಲು ಕ್ರಮ ಕೈಗೊಳ್ಳುತ್ತದೆಯೇ?*

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಸಚಿವರು) :

ಅ) ದಿನಾಂಕ 26-5-89ರಿಂದ.

ಆ) ಮೇಲ್ಕಂಡ ಉತ್ತರದಿಂದಾಗಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.